ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಶಾಸಕರ ಆಯ್ಕೆಪಟ್ಟಿಯನ್ನು ಹೊರತುಪಡಿಸಿ ನಿಗಮದ ವಿವೇಚನಾ ಕೋಟಾದಡಿಯಲ್ಲಿ ಕೆಲವೊಂದು ಯೋಜನೆಗಳಲ್ಲಿ ಮಂಜೂರಾತಿ ನೀಡಿ ನಿಯಮಾನುಸಾರ ಸಾಲ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಇಂತಹ ವಿಷಯಗಳಲ್ಲಿ ಅವ್ಯವಹಾರದ ಬಗ್ಗೆ ನಿರ್ದಿಷ್ಟವಾದ ಪ್ರಕರಣಗಳು ಗಮನಕ್ಕೆ ಬಂದಲ್ಲಿ ಆ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು.

ಆ) ಹೌದು.

ಇ) ನಿಗಮದ ಯೋಜನೆಗಳನ್ನು ನಿಯಮಾನುಸಾರ ಜಾರಿಗೊಳಿಸಲಾಗುತ್ತಿದೆ. ಯಾವುದೇ ಅವ್ಯವಹಾರ ಕಂಡು ಬಂದಲ್ಲಿ ಅಂತಹವರ ಮೇಲೆ ಕಟ್ಟು ನಿಟ್ಟಿನ ಕ್ರಮ ತೆಗೆದುಕೊಳ್ಳಲಾಗುವುದು.

ನಕಲಿ ವೈದ್ಯರು ಕ್ಲಿನಿಕ್ ನಡೆಸುತ್ತಿರುವುದು

2747 (2977), ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಮಡಿಕೇರಿ)

ಅ) ರಾಜ್ಯದಲ್ಲಿ ಎಷ್ಟು ನಕಲಿ ವೈದ್ಯರು ಕ್ಲಿನಿಕ್ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನಕಲಿ ವೈದ್ಯರು ನಡೆಸುತ್ತಿರುವ ಕ್ಲಿನಿಕ್‌ನ್ನು ತೆರವುಗೊಳಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ;

ಇ) ನಕಲಿ ವೈದ್ಯರು ನೀಡಿದ ಚಿಕಿತ್ಸೆಯಿಂದ ಎಷ್ಟು ಜನ ಮರಣ ಹೊಂದಿರುತ್ತಾರೆ; (ಜಿಲ್ಲಾವಾರು ವಿವರ ಒದಗಿಸುವುದು)?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 2683

ಆ) ಈವರೆಗೂ 221 ನಕಲಿ ವೈದ್ಯರ ಮೇಲೆ ಕರ್ನಾಟಕ ಆಕ್ಟ್ 9 ಆಫ್ 1962ರ ದಿ ಕರ್ನಾಟಕ ಆಯುರ್ವೇದ, ನ್ಯಾಚ್ಯುರೋಪತಿ, ಸಿದ್ಧ, ಯುನಾನಿ ಮತ್ತು ಯೋಗ ಪ್ರಾಕ್ಟೀಷನರ್ಸ್ ರಿಜಿಸ್ಟ್ರೇಷನ್ ಮತ್ತು ಮೆಡಿಕಲ್ ಪ್ರಾಕ್ಟೀಷನರ್ಸ್ ಮಿಸಲೇನಿಯಸ್ ಆಕ್ಟ್ 1961ರ ಸೆಕ್ಷನ್ 34ರ ಉಲ್ಲಂಘನೆಯಾಗಿರುವುದನ್ನು ಪರಿಗಣಿಸಿ ಸದರಿಯವರ ವಿರುದ್ಧ ದೂರು ನೀಡಿ ಎಫ್.ಐ.ಆರ್. ದಾಖಲಿಸಲಾಗಿದೆ. ಉಳಿದ 2462 ನಕಲಿ ವೈದ್ಯರಿಗೆ ಈಗಾಗಲೇ ಕ್ಲಿನಿಕ್ ಮುಚ್ಚಿ ವೈದ್ಯವೃತ್ತಿ ನಿಲ್ಲಿಸುವಂತೆ ನೋಟೀಸು ನೀಡಲಾಗಿರುತ್ತದೆ.

ಇ) ಇದುವರೆವಿಗೂ ಯಾವುದೇ ಪ್ರಕರಣಗಳು ವರದಿಯಾಗಿರುವುದಿಲ್ಲ.

ಐ.ಟಿ. ಪಾರ್ಕ್‌ಗಳು

2748 (3954), ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ)

ಅ) ರಾಜ್ಯದ ವಿವಿಧ ಕಡೆಗಳಲ್ಲಿ ಸ್ಥಾಪಿಸಲಾಗಿರುವ ಐ.ಟಿ. ಪಾರ್ಕ್‌ಗಳ ಸಂಖ್ಯೆ ಎಷ್ಟು, ಎಲ್ಲೆಲ್ಲಿ ಇವೆ; ಯಾವ ಯಾವ ವರ್ಷಗಳಲ್ಲಿ ಸ್ಥಾಪಿಸಲಾಗಿದೆ, ಇವುಗಳಿದ ಕನ್ನಡ ಭಾಷಿಕರಿಗೆ ಎಷ್ಟೆಷ್ಟು ಉದ್ಯೋಗಗಳು ಸೃಷ್ಟಿಯಾಗಿವೆ (ಜಿಲ್ಲಾವಾರು ವಿವರಗಳನ್ನು ನೀಡುವುದು);

ಆ) ಬಹುತೇಕ ಐ.ಟಿ. ಪಾರ್ಕ್‌ಗಳು ಬೆಂಗಳೂರು ನಗರ ಮತ್ತು ಆಯಾ ಸ್ಥಳಗಳಲ್ಲಿ ಇರುವುದರಿಂದ ಉತ್ತರ ಕರ್ನಾಟಕ ಜಿಲ್ಲೆಗಳು ಮಾಹಿತಿ ತಂತ್ರಜ್ಞಾನದಲ್ಲಿ ಹಿಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ನೀಡುವುದು);

ಇ) ಹಾಗಿದ್ದಲ್ಲಿ, ಬಿಜಾಪುರ ಜಿಲ್ಲೆಯಲ್ಲಿ ಐ.ಟಿ. ಪಾರ್ಕ್‌ಗಳನ್ನು ಸ್ಥಾಪಿಸಲಾಗುವುದೇ (ಸಂಪೂರ್ಣ ಮಾಹಿತಿ ನೀಡುವುದು)?